18

ಕರ್ನಾಟಕ ಸರ್ಕಾರ

ಸಂಖ್ಯೆ: ಸಕಇ 168 ಪಕವಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 12-11-2020.

## ಸುತ್ತೋಲೆ

ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ
ಕ್ರಮ ಸಂ.: 1935091/2020
ದಿನಾಂಕ 20/11/2020
ಉ.ನಿ. ಶಾಖೆ: | ಜ.ನಿ. ಶಾಖೆ: | ಉ.ನಿ. ಶಾಖೆ:

ವಿಷಯ: ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ಪ.ಜಾ. ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಂತೆ ಸುತ್ತೋಲೆ ಹೊರಡಿಸುವ ಕುರಿತು.

ಉಲ್ಲೇಖ: ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕನಿ/ ಇಡಿ-03/ ಸಿಆರ್- 125/2020-21, ದಿನಾಂಕ: 19-08-2020

* * * * * *

ಅ.ನಿ. ಅಭಿವೃದ್ಧಿ

ಜಂ.ನಿ. ಶಿಕ್ಷಣ

ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಮುಂಗಡವಾಗಿ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸುತ್ತಿರುವುದು ಕಂಡು ಬಂದಿರುತ್ತದೆ. 2019-20ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶ ಪೋರ್ಟಲ್ ಅಭಿವೃದ್ಧಿ ಪಡಿಸಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ವಿವರಗಳನ್ನು ಶಿಕ್ಷಣ ಇಲಾಖೆಯ SATS ದತ್ತಾಂಶದಿಂದ ಪಡೆಯಲಾಗುತ್ತಿದೆ ಮತ್ತು ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಇ-ದೃಢೀಕರಣ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ವಿದ್ಯಾರ್ಥಿಯ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಿ DBT ಹಾಗೂ ಖಜಾನೆ-2 ಮೂಲಕ ವಿದ್ಯಾರ್ಥಿಯ ಖಾತೆಗೆ ನೇರವಾಗಿ ವಿದ್ಯಾರ್ಥಿ ವೇತನವನ್ನು ಇ-ಪೋರ್ಟಲ್ ನಲ್ಲಿ ಜಮೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಕೆಲವೊಂದು ತಾಂತ್ರಿಕ ಕಾರಣಗಳಿಂದಾಗಿ ವಿದ್ಯಾರ್ಥಿವೇತನ ನೀಡುವಲ್ಲಿ ವಿಳಂಬವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಕೆಲವು ಖಾಸಗಿ ಕಾಲೇಜು/ವಿಶ್ವವಿದ್ಯಾಲಯಗಳು ಹಾಗೂ ಶಿಕ್ಷಣ ಸಂಸ್ಥೆಗಳು ಅರ್ಹರಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸುವಂತೆ ಒತ್ತಾಯಿಸುತ್ತಿರುವುದು ಕಂಡು ಬಂದಿದ್ದು, ಇದರಿಂದ ಶೈಕ್ಷಣಿಕ ಚಟುವಟಿಗಳಿಗೆ ಅನಾನುಕೂಲವಾಗಿರುತ್ತದೆ.

ಮುಂದುವರೆದು, ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹರಿರುವ ಎಲ್ಲಾ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡುತ್ತಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಡೀಮ್ಡ್ ವಿಶ್ವವಿದ್ಯಾಲಯ/ಖಾಸಗಿ ವಿಶ್ವವಿದ್ಯಾಲಯ, ಸರ್ಕಾರಿ /ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಕಾಲೇಜು ಶುಲ್ಕಗಳನ್ನು ಪಡೆಯದಂತೆ ಸಂಬಂಧಪಟ್ಟ ಶಿಕ್ಷಣ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನವನ್ನು ನೀಡುವುದು ಸೂಕ್ತವೆಂದು ಸರ್ಕಾರವು ಮನಗಂಡಿರುತ್ತದೆ.

Manager 24/11/2020

27/11/2020

---------2

Scanned with CamScanner

-2-

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದಿಂದ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಆದರೆ, ಕೆಲವು ತಾಂತ್ರಿಕ ಸಮಸ್ಯೆಗಳ ಕಾರಣಗಳಿಂದ, ಕೆಲವು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವುದು ವಿಳಂಬವಾಗುತ್ತಿದೆ. ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಶುಲ್ಕ ಪಾವತಿಸುವಂತೆ ಒತ್ತಾಯಿಸುತ್ತಿರುವುದು ವಿದ್ಯಾರ್ಥಿಗಳ ಭವಿಷ್ಯದ ಮೇಲೆ ದುಷ್ಪರಿಣಾಮವನ್ನುಂಟು ಮಾಡುತ್ತದೆ. ಅಲ್ಲದೇ ವಿದ್ಯಾರ್ಥಿವೇತನವು ಕೆಲವು ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ದಾರಿ ದೀಪವಾಗಿರುತ್ತದೆ. ಅನೇಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶುಲ್ಕ ಪಾವತಿಸಲು ಅಸಹಾಯಕರಾಗಿರುತ್ತಾರೆ. ಶಿಕ್ಷಣ ಸಂಸ್ಥೆಗಳ ಈ ಒಂದು ಒತ್ತಾಯದಿಂದ ಶುಲ್ಕ ಪಾವತಿಸಲು ಸಾಧ್ಯವಾಗದೇ ವಿದ್ಯಾರ್ಥಿಗಳು ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸುವ ಸಾಧ್ಯತೆ ಇರುತ್ತದೆ. ಆದುದರಿಂದ, ರಾಜ್ಯದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ/ಡೀಮ್ಡ್ ವಿಶ್ವವಿದ್ಯಾಲಯ/ಖಾಸಗಿ ವಿಶ್ವವಿದ್ಯಾಲಯ, ಸರ್ಕಾರಿ /ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅವರ ಪ್ರವೇಶಾತಿ ಸಮಯದಲ್ಲಿ ಕಾಲೇಜು ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯಿಸಬಾರದೆಂದು ಈ ಮೂಲಕ ಸೂಚನೆ ನೀಡಲಾಗಿದೆ.

(ಡಾ|| ನಾಗಾಂಬಿಕಾ ದೇವಿ)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ)(ಲೆಕ್ಕಪರಿಶೋಧನೆ-2 & 2), ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
4. ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ (ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಇವರ ಮುಖಾಂತರ)
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
6. ಎಲ್ಲಾ ಜಿಲ್ಲಾಧಿಕಾರಿಗಳಿಗೆ
7. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ.
8. ಸಂಬಂಧಿಸಿದ ಜಂಟಿ/ಉಪ ನಿರ್ದೇಶಕರುಗಳು, ಸಮಾಜ ಕಲ್ಯಾಣ ಇಲಾಖೆ/
9. ಸಂಬಂಧಪಟ್ಟ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ (ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಇವರ ಮುಖಾಂತರ)
10. ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು

ಪ್ರತಿಗಳು:-

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು.

*****

Scanned with CamScanner